# ಕರ್ನಾಟಕ ವಿಧಾನ ಪರಿಷತ್ತು.

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 915 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ). |
| ಉತ್ತರಿಸಬೇಕಾದ ದಿನಾಂಕ | : | 21.12.2021 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು. |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮೈಸೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮೈಸೂರು ತಾಲ್ಲೂಕು ಬಲ್ಲಹಳ್ಳಿ ಗ್ರಾಮದ ಸರ್ವೆ ನಂಬರುಗಳಲ್ಲಿ ವಸತಿ ಯೋಜನೆಗೆ ಭೂಮಿಯನ್ನು ಯಾವಾಗ ಭೂಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆ; | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮೈಸೂರು ತಾಲ್ಲೂಕು, ಬಲ್ಲಹಳ್ಳಿ ಗ್ರಾಮದ ವಿವಿಧ ಸರ್ವೆ ನಂಬರುಗಳಲ್ಲಿ ವಸತಿ ಬಡಾವಣೆ ಯೋಜನೆಗಾಗಿ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ದಿನಾಂಕ: 28.06.2016 ರಂದು ಪ್ರಾಧಿಕಾರವು ಪ್ರಾಥಮಿಕ ಅಧಿಸೂಚನೆ ಹೊರಡಿಸಿರುತ್ತದೆ. ಹೊಸ ಭೂಸ್ವಾಧೀನ ಕಾಯ್ದೆಯಂತೆ ಅಂತಿಮ ಅಧಿಸೂಚನೆ ಪ್ರಕ್ರಿಯೆ ಪ್ರಾರಂಭಿಸುವ ಪೂರ್ವದಲ್ಲಿ ಪರಸ್ಪರ ಒಪ್ಪಿಗೆಯಂತೆ ಜಂಟಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಅಭಿವೃದ್ಧಿ ಪಡಿಸಲು ಪ್ರಾಧಿಕಾರ ಹಾಗೂ ರೈತರು ಆಸಕ್ತಿ ವ್ಯಕ್ತ ಪಡಿಸಿರುವುದರಿಂದ ಪರಸ್ಪರ ಒಪ್ಪಂದದ ಮೇರೆಗೆ ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುತ್ತಿದೆ. |
| ಆ | ಸದರಿ ಯೋಜನೆಯಲ್ಲಿ ಎಷ್ಟು ಮಂದಿ ರೈತರ, ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆಗೆ ಒಳಪಡಿಸಲಾಗಿದೆ. | ಸದರಿ ವಸತಿ ಬಡಾವಣೆ ಯೋಜನೆಯಲ್ಲಿ 295 ಮಂದಿ ರೈತರು/ವಾರಸುದಾರರುಗಳ 381ಎಕರೆ 01ಗುಂಟೆ ವಿಸ್ತೀರ್ಣದ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆಗೆ ಒಳಪಡಿಸಲಾಗಿದೆ. |
| ಇ | ಸದರಿ ಯೋಜನೆಯು ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಈ | ಇದರಿಂದ ರೈತರು ತೊಂದರೆಗೊಳಗಾಗಿ, ಹತ್ತಾರು ಬಾರಿ ಚಳುವಳಿ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತಾಪಿತ ಬಡಾವಣೆಯನ್ನು ಪರಸ್ಪರ ಒಪ್ಪಂದದ ಮೇರೆಗೆ ಅಭಿವೃದ್ಧಿ ಪಡಿಸಲು ಕೆಲವು ರೈತರು/ವಾರಸುದಾರರು ಆಸಕ್ತಿ ತೋರಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಒಪ್ಪಿಗೆ ಪತ್ರ ನೀಡಿರುತ್ತಾರೆ. ಕೆಲವು ಭೂ ಮಾಲೀಕರು ವಿರೋಧ ವ್ಯಕ್ತಪಡಿಸಿರುತ್ತಾರೆ. ಈ ಸಂಬಂಧ ಸಮಾಲೋಚನೆ/ಅವರುಗಳನ್ನು ಮನವೊಲಿಸಲು ಪ್ರಾಧಿಕಾರದ ವತಿಯಿಂದ ಪ್ರಯತ್ನಿಸಲಾಗುತ್ತಿರುವುದರಿಂದ ವಿಳಂಭವಾಗಿರುತ್ತದೆ. ಪ್ರಾಥಮಿಕ ಅಧಿಸೂಚನೆಯಲ್ಲಿ ಸ್ವಾಧೀನಕ್ಕೊಳಪಡಿಸಿರುವ ಎಲ್ಲಾ ರೈತರು/ ವಾರಸುದಾರರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪರಸ್ಪರ ಒಪ್ಪಂದದ ಮೇರೆಗೆ ಬಡಾವಣೆಯನ್ನು ಅಭಿವೃದ್ಧಿ ಪಡಿಸಲು ಆದ್ಯತೆ ಮೇರೆಗೆ ಕ್ರಮವಹಿಸಲಾಗುವುದು. |
| ಉ | ಸದರಿ ಯೋಜನೆಯನ್ನು ಪೂರ್ಣಗೊಳಿಸದಿರಲು ಕಾರಣಗಳೇನು; | |
| ಊ | ಯಾವ ಕಾಲಮಿತಿಯಲ್ಲಿ ಯೋಜನೆಯನ್ನು ಪೂರ್ಣಗೊಳಿಸಲಾಗುವುದು? | |

ಸಂಖ್ಯೆ: ನಅಇ 487 ಮೈಅಪ್ರಾ 2021 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು